# ಬಿಐಇಟಿ.ಯಲ್ಲಿ ಕೋಟಿ ಕಂಠ ಗಾಯನ



ದಾವಣಗೆರೆ: ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಕರ್ನಾಟಕ ಸರ್ಕಾರ, ರಾಷ್ಟ್ರೀಯ ಸೇವಾ ಯೋಜನೆ, ಯೂತ್ ರೆಡ್ ಕ್ರಾಸ್ ವಿಭಾಗ ,ಐ.ಎಸ್.ಟಿ.ಇ. – ಬಿ.ಐ.ಇ.ಟಿ, ಇನ್‌ಸ್ಟಿಟ್ಯೂಷನ್ ಆಫ್ ಇಂಜಿನಿಯರ್ಸ್ ಹಾಗೂ ಕಾಲೇಜಿನ ಎಲ್ಲಾ ವಿಭಾಗಗಳ ಘಟಕಗಳ ಸಂಯುಕ್ತಾಶ್ರಯದಲ್ಲಿ ಕನ್ನಡ ರಾಜ್ಯೋತ್ಸವ ಪ್ರಯುಕ್ತ ಕೋಟಿ ಕಂಠ ಗಾಯನ ಕಾರ್ಯಕ್ರಮವನ್ನು ಎಸ್. ಎಸ್. ಮಲ್ಲಿಕಾರ್ಜುನ ಸಭಾಂಗಣದಲ್ಲಿ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಆಯ್ದ ಆರು ಕನ್ನಡ ಗೀತೆಗಳನ್ನು ಹಾಡಲಾಯಿತು.

ಸಮಾರಂಭಕ್ಕೆ ಮುಖ್ಯ ಅತಿಥಿಗಳಾಗಿ ಆಗಮಿಸಿ, ಕಾರ್ಯಕ್ರಮವನ್ನು ಉದ್ಘಾಟಿಸಿದ ಕಾಲೇಜಿನ ಪ್ರಾಂಶುಪಾಲ ಡಾ|| ಹೆಚ್.ಬಿಅರವಿಂದ ಅವರು ತಮ್ಮ ಬಾಷಣದಲ್ಲಿ, ಕನ್ನಡದ ಭಾಷೆ ಮತ್ತು ಅದರ ಮಹತ್ವ ಬಗ್ಗೆ ತಿಳಿಸಿದರು.

ಕಾಲೇಜಿನ ನಿರ್ದೇಶಕ ಪ್ರೋ.ವೈ. ವೃಷಭೇಂದ್ರಪ್ಪನವರು ತಮ್ಮ ಭಾಷಣದಲ್ಲಿ, ಏಕೀಕರಣ ಸಂದರ್ಭದಿಂದ ಇಂದಿನವರೆವಿಗೂ ಕನ್ನಡ ಹಾಗು ಕರ್ನಾಟಕದಲ್ಲಿ ಆದ ಬದಲಾವಣೆಗಳ ಬಗ್ಗೆ ಮನಮುಟ್ಟುವಂತೆ ತಿಳಿಸಿದರು.

ಕಾರ್ಯಕ್ರಮಕ್ಕೆ ಮಾರ್ಗದರ್ಶನವನ್ನು ಡಾ||.ಟಿ.ಕೆ. ಕೃಷ್ಣಕುಮಾರ್, ಕಾರ್ಯಕ್ರಮಾದಿಕಾರಿಗಳು, ರಾಷ್ಟ್ರೀಯ ಸೇವಾ ಯೋಜನೆ, ಡಾ||.ಎಸ್.ಎಂ. ಚಂದ್ರಶೇಖರ್, ಕಾರ್ಯಕ್ರಮಾಧಿಕಾರಿಗಳು, ಯೂತ್‌ರೆಡ್‌ಕ್ರಾಸ್ ವಿಭಾಗದವರು ಸಲಹೆ ನೀಡಿದರು.

ಕಾಲೇಜಿನ ಎಲ್ಲಾ ವಿಭಾಗದ ಮುಖ್ಯಸ್ಥರುಗಳು, ವಿವಿಧ ನಿಕಾಯದ ಅಧ್ಯಕ್ಷರು, ಉಪನ್ಯಾಸಕರುಗಳು, ವಿದ್ಯಾರ್ಥಿಗಳು, ರಾಷ್ಟ್ರೀಯ ಸೇವಾ ಯೋಜನೆಯ ಸ್ವಯಂಸೇವಕರು ಉಪಸ್ಥಿತರಿದ್ದರು.



ದಾವಣಗೆರೆಯ ಬಿಐಇಟಿ ಕಾಲೇಜಿನ ಎಸ್. ಮಲ್ಲಿಕಾರ್ಜುನ ಸಭಾಂಗಣದಲ್ಲಿ ಶುಕ್ರವಾರ ಕನ್ನಡ ರಾಜ್ಯೋತ್ಸವ ಅಂಗವಾಗಿ ಹಮ್ಮಿಕೊಂಡಿದ್ದ ಕೋಟಿ ಕಂಠ ಗಾಯನ ಕಾರ್ಯಕ್ರಮವನ್ನು ನಿರ್ದೇಶಕ ಪ್ರೊ.ವೈ. ವೃಷಭೇಂದ್ರಪ್ಪ, ಉದ್ಘಾಟಿಸಿದರು. ಡಾ. ಎಚ್.ಬಿ. ಅರವಿಂದ, ಡಾ.ಟಿ.ಕೆ. ಕೃಷ್ಣಕುಮಾರ್, ಡಾ.ಎಸ್.ಎಂ. ಚಂದ್ರಶೇಖರ್ ಇತರರಿದ್ದರು.

# ಬಿಐಇಟಿಯಲ್ಲಿ ಕೋಟಿ ಕಂಠ ಗಾಯನ ಕಾರ್ಯಕ್ರಮ



ದಾವಣಗೆರೆ, ಅ.30- ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ರಾಷ್ಟ್ರೀಯ ಸೇವಾ ಯೋಜನೆ, ಯೂತ್ ರೆಡ್ ಕ್ರಾಸ್ ವಿಭಾಗ, ಐ.ಎಸ್.ಟಿ.ಇ., ಬಿ.ಐ.ಇ.ಟಿ, ಇನ್‌ಸ್ಟಿಟ್ಯೂಟ್ ಆಫ್ ಇಂಜಿನಿಯರ್ಸ್ ಹಾಗೂ ಮತ್ತು ಕಾಲೇಜಿನ ಎಲ್ಲಾ ವಿಭಾಗಗಳ, ಘಟಕಗಳ ಸಂಯುಕ್ತಾಶ್ರಯದಲ್ಲಿ ಕನ್ನಡ ರಾಜ್ಯೋತ್ಸವ ಪ್ರಯುಕ್ತ ಕೋಟಿ ಕಂಠ ಗಾಯನ ಕಾರ್ಯಕ್ರಮವನ್ನು ಎಸ್. ಎಸ್. ಮಲ್ಲಿಕಾರ್ಜುನ ಸಭಾಂಗಣದಲ್ಲಿ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಆಯ್ದ ಆರು ಕನ್ನಡ ಗೀತೆಗಳನ್ನು ಹಾಡಲಾಯಿತು.

ಕಾರ್ಯಕ್ರಮವನ್ನು ಉದ್ಘಾಟಿಸಿದ ಕಾಲೇಜಿನ ಪ್ರಾಂಶುಪಾಲ ಡಾ. ಹೆಚ್. ಬಿ. ಅರವಿಂದ್ ಮಾತನಾಡಿ, ಕನ್ನಡದ ಭಾಷೆ ಮತ್ತು ಅದರ ಮಹತ್ವ ಬಗ್ಗೆ ತಿಳಿಸಿದರು.

ಕಾಲೇಜಿನ ನಿರ್ದೇಶಕ ಪ್ರೊ. ವೈ. ವೃಷಭೇಂದ್ರಪ್ಪ ಏಕೀಕರಣ ಸಂದರ್ಭದಿಂದ ಇಂದಿನವರೆಗೂ ಕನ್ನಡ ಹಾಗು ಕರ್ನಾಟಕದಲ್ಲಿ ಆದ ಬದಲಾವಣೆಗಳ ಬಗ್ಗೆ ಮನಮುಟ್ಟುವಂತೆ ತಿಳಿಸಿದರು. ಕಾರ್ಯಕ್ರಮಕ್ಕೆ ಮಾರ್ಗದರ್ಶನವನ್ನು ಡಾ. ಟಿ.ಕೆ. ಕೃಷ್ಣಕುಮಾರ್, ಕಾರ್ಯಕ್ರಮಾಧಿಕಾರಿಗಳು, ರಾಷ್ಟ್ರೀಯ ಸೇವಾ ಯೋಜನೆ, ಡಾ. ಎಸ್.ಎಂ. ಚಂದ್ರಶೇಖರ್, ಕಾರ್ಯಕ್ರಮಾಧಿಕಾರಿ, ಯೂತ್ ರೆಡ್ ಕ್ರಾಸ್ ವಿಭಾಗದವರು ಸಲಹೆ ನೀಡಿದರು.